# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ–ಅಂತಿಮ ಆದೇಶ ಹೊರಡಿಸುವ ಬಗ್ಗೆ–ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/547/ಗ್ರಾಪಂಕಾ/2016 ದಿನಾಂಕ:26.10.2016
2. ಅಪರ ನಿಬಂಧಕರು, ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1/DE/596/2016/ARE-9 Dt. 22.12.2018
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/596/2016/ARE-9 Dt.31.12.2018

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"You-DGO being Secretary, Aaldala Grama Panchyath, Aaldala, Surapur Taluk, Kalaburagi District, were illegalities in the selection of beneficiaries for allotment of houses under Indira Awaz Scheme for the year 2008-09 and there was misappropriation of funds in execution of work under NREGA Scheme and bogus bills were created. Therebym you-DGO have failed to maintain absolute integrity, devotion to duty and committed an act which is unbecoming of a Government Servant and thus you-DGO have guilty of misconduct under Rule 3(1)(i) to (iii) of KCS (Conduct) Rules 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಿ ಆದೇಶಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅಪರ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ

ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ರವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:48:ಗ್ರಾಪಂಕಾ2019 ಬೆಂಗಳೂರು, ದಿನಾಂಕ:07-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು, ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ ರವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನಲೆಯಲ್ಲಿ ಸದರಿಯವರನ್ನು ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

7/3/19

(ಮುಬಾರಕ್ ಅಹಂದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಯಾದಗಿರಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ,
6. ಶ್ರೀ ಬನಯ್ಯ ಸ್ವಾಮಿ, ಹಿಂದಿನ ಕಾರ್ಯದರ್ಶಿ, ಆಲ್ದಾಳ ಗ್ರಾಮ ಪಂಚಾಯತ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.